ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 16ನೇ ಮಾರ್ಚ್, 2020

ಮಾಹಿತಿ ತಂತ್ರಜ್ಞಾನ ಇಲಾಖೆಯಲ್ಲಿ ಬರುವ ನಿಗಮ ಸಂಸ್ಥೆಗಳ ಬಗ್ಗೆ

ಶ್ರೀ ಆರ್.ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):-

1019 (1224) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಅಧೀನದಲ್ಲಿ ಬರುವ ಸಾರ್ವಜನಿಕ ನಿಗಮಗಳು/ಕಂಪನಿಗಳು, ಶಾಸನಬದ್ಧ ಮಂಡಳಿಗಳು, ಉದ್ದಿಮೆಗಳು, ಅಂಗ ಸಂಸ್ಥೆಗಳು ಮತ್ತು ಸೊಸೈಟಿಗಳು ಹಾಗೂ ಇತರೆ ಎಷ್ಟಿವೆ; ಯಾವುವು; (ವಿವರವಾಗಿ ಇಲಾಖಾವಾರು, ಕೇಂದ್ರ ಕಛೇರಿ, ವಿಳಾಸ ಹಾಗೂ ದೂರವಾಣಿ ಸಂಖ್ಯೆಗಳನ್ನು ಒಳಗೊಡಂತೆ ವಿವರವಾದ ಮಾಹಿತಿ ಕೊಡುವುದು)

(ಆ) ಸದರಿ ಇಲಾಖೆಯಡಿ ಹಾಲಿ ಜಾರಿಯಲ್ಲಿರುವ ಯೋಜನೆಗಳಾವುವು; (ಯೋಜನೆವಾರು ವಿವರವಾದ ಮಾಹಿತಿ ನೀಡುವುದು)

(ಇ) ಸದರಿ ಇಲಾಖೆಯಡಿ ಹಾಲಿ ಜಾರಿಯಲ್ಲಿರುವ ಕೇಂದ್ರ ಸರ್ಕಾರದ ಪುರಸ್ಕೃತ / ಪ್ರಾಯೋಜಿತ/ಇತರೆ ಯೋಜನೆಗಳಾವುವು; ಸದರಿ ಯೋಜನೆಗಳಿಗೆ 2019-20ನೇ ಸಾಲಿನಲ್ಲಿ ಎಷ್ಟು ಹಣ ಬಂದಿದೆ; ಇನ್ನೂ ಎಷ್ಟು ಹಣ ಬರಬೇಕಿದೆ; (ಯೋಜನಾವಾರು ಮಾಹಿತಿ ನೀಡುವುದು)

(ಈ) ಇಲಾಖೆಯ ಅಧೀನದಲ್ಲಿ ಬರುವ ಸಂಸ್ಥೆಗಳು ಎಷ್ಟು ಹಣವನ್ನು ಬ್ಯಾಂಕ್‌ನಲ್ಲಿ ಎಫ್.ಡಿ. ಇಟ್ಟಿವೆ; ಎಫ್.ಡಿ ಇಡಲು ಕಾರಣಗಳೇನು; ಈ ಹಣವನ್ನು ಯಾವಾಗ ಉಪಯೋಗಿಸಲಾಗುವುದು? (ಸಂಸ್ಥೆವಾರು ಮಾಹಿತಿ ನೀಡುವುದು)